**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ,</u>**

**<u>ಹೊಸಕೋಟೆ</u>**

**<u>ಸಿ. ಸಿ. ನಂ.337/2018</u>**

**ಪಿರ್ಯಾದುದಾರರು:-** **ನಂದಗುಡಿ ಪೊಲೀಸರು, ಹೊಸಕೋಟೆ**

ವಿರುದ್ಧ

ಆರೋಪಿ:- ಸಚ್ಚಿ ಆನಂದ ಬಿನ್ ವೆಂಕಟೇಶ, 49 ವರ್ಷ
ವಾಸ: ವೆಲ್ಲಮೆನುರು ಗ್ರಾಮ,
ವೇಲೂರ್ ತಾ||, ತಮಿಳುನಾಡು ರಾಜ್ಯ.

## <u>ಆಪಾದನೆ</u>

ಶ್ರೀಮತಿ ಚೈತ್ರಾ ವ. ಕುಲಕರ್ಣಿ, ಬಿ.ಎ., ಎಲ್.ಎಲ್.ಬಿ., ಎಲ್.ಎಲ್.ಎಂ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯಾದ ನಾನು, ಆರೋಪಿಯಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:

ದಿ: 18.07.2017 ರಂದು ಮಧ್ಯಾಹ್ನ 3.00 ಗಂಟೆ ಸಮಯದಲ್ಲಿ ಘನ ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಹೊಸಕೋಟೆ ತಾಲ್ಲೂಕು, ನಂದಗುಡಿ ಪೊಲೀಸ್ ಠಾಣಾ ಸರಹದ್ದು, ಹೊಸಕೋಟೆ-ಕೋಲಾರ ಎನ್.ಎಚ್.75 ರಸ್ತೆ, ಮುಗಬಾಳ ಬಳಿ ರಸ್ತೆಯಲ್ಲಿ ಆರೋಪಿಯಾದ ನೀವು ಟಿಎನ್-73-ಜೆ-3114 ಲಾರಿಯನ್ನು ಹೊಸಕೋಟೆ ಕಡೆಯಿಂದ ಕೋಲಾರದ ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಅದೇ ರಸ್ತೆಯಲ್ಲಿ ಹೋಗುತ್ತಿದ್ದ ಕೆಎ-53-ಈಪಿ-9842 ಮೋಟಾರ್ ಸೈಕಲ್‌ಗೆ ಡಿಕ್ಕಿ ಹೊಡೆಸಿದ್ದರ ಪರಿಣಾಮ ಸದರಿ ಮೋಟಾರ್ ಸೈಕಲ್ ರಸ್ತೆ ಮೇಲೆ ಬಿದ್ದು ಜಖಂಗೊಂಡಿದ್ದು ಅದರ ಸವಾರ ನಂದೀಶನ ಎರಡೂ ಕಾಲುಗಳ ಮೇಲೆ ಲಾರಿಯ ಹಿಂಭಾಗದ ಎಡಬದಿಯ ಚಕ್ರಗಳು ಹರಿದು ರಕ್ತಗಾಯಗಳಾಗಿದ್ದು ಚಿಕಿತ್ಸೆ ಫಲಕಾರಿಯಾಗದೆ ದಿ:20.07.2017 ರಂದು ರಾತ್ರಿ 10.50 ಗಂಟೆಗೆ ಹಾಸ್ಮಾಟ್ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾರೆ. ಚಾ.ಸಾ.1ರವರಿಗೆ ಸಣ್ಣಪುಟ್ಟ ತರಚಿದ ಗಾಯಗಳಾಗಿರುತ್ತವೆ. ಅಪಘಾತ ಪಡಿಸಿ ವಾಹನವನ್ನು ನಿಲ್ಲಿಸದೆ ಗಾಯಾಳುವಿಗೆ ಚಿಕಿತ್ಸೆ ಕೊಡಿಸದೆ ಸ್ಥಳದಿಂದ ಹೊರಟು ಹೋಗಿರುತ್ತೀರಿ ಎಂದು ಆರೋಪಿಸಲಾಗಿದೆ.

ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ.279, 304[ಎ]ರ ಸಹವಾಚಕ ಕಲಂ.187 ಭಾರತೀಯ ಮೋಟಾರ್ ವಾಹನ ಕಾಯ್ದೆಯ ರೀತ್ಯ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರೆಂದು ಆರೋಪಿಸಲಾಗಿದೆ.

ಈ ಮೇಲ್ಕಂಡ ಆರೋಪವನ್ನು ನೀವು ಈ ನ್ಯಾಯಾಲಯದ ಸಂಜ್ಞಾನದೊಳಗೆ ಎಸಗಿದ್ದು ನಿಮ್ಮನ್ನು ವಿಚಾರಣೆಗೆ ಒಳಪಡಿಸಲು ಈ ಮೂಲಕ ನಾನು ನಿರ್ದೇಶಿಸುತ್ತೇನೆ.

**2ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,**
**ಹೊಸಕೋಟೆ.**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ,**

**ಹೊಸಕೋಟೆ**

**ಸಿ. ಸಿ. ನಂ.337/2018**

**ಫಿರ್ಯಾದುದಾರರು:-** **ನಂದಗುಡಿ ಪೊಲೀಸರು, ಹೊಸಕೋಟೆ**

ವಿರುದ್ದ

ಆರೋಪಿ:- ಸಚ್ಚಿ ಆನಂದ ಬಿನ್ ವೆಂಕಟೇಶ, 49 ವರ್ಷ
ವಾಸ: ವೆಲ್ಲಮೆನುರು ಗ್ರಾಮ,
ವೇಲೂರ್ ತಾ||, ತಮಿಳುನಾಡು ರಾಜ್ಯ.

## ಆಪಾದನೆ

ಪ್ರಶ್ನೆ1: ಮೇಲ್ಕಂಡ ದೋಷಾರೋಪಣೆ ಓದಿ ಹೇಳಿದ್ದು ನಿಮಗೆ ಅರ್ಥವಾಯಿತೆ?

ಉತ್ತರ:

ಪ್ರಶ್ನೆ2: ನೀವು ತಪ್ಪನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆ?

ಉತ್ತರ:

ಮೇಲ್ಕಂಡ ಆಪಾದನೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ಓದಿ ಹೇಳಿ ಅವರ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನೊಳಗೊಂಡಿದೆ ಎಂದು ತೆರೆದ ನ್ಯಾಯಾಲಯದಲ್ಲಿ ದಿನಾಂಕ:06.02.2024 ರಂದು ಧೃಢೀಕರಿಸಿದ್ದೇನೆ.

**2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ. ನ್ಯಾಯಾಲಯ., ಹೊಸಕೋಟೆ.**